ಕರ್ನಾಟಕ ವಿಧಾನ ಸಭೆ

KARNATAKA LEGISLATIVE ASSEMBLY

ಮಂಗಳವಾರ ಆನೇ ಫೆಬ್ರವರಿ ೧೯೯೪ ಸಾಯನ ಸೌರ ಮಾಘ, ಶಕ ೧೯೧೫ ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಬೆಳಗ್ಗೆ ೧೧.೧೦ ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು : (ಶ್ರೀ. ವಿ.ಎಸ್. ಕೌಜಲಗಿ) ಅವರು ಪೀಠವನ್ನು ಅಲಂಕರಿಸಿದ್ದರು.

ಸಂತಾಪ ಸೂಚನೆ

ಅಧ್ಯಕ್ಷರು : ವಿಧಾನಸಭೆಯ ಮಾಜಿ ಸದಸ್ಯರಾದ ಶ್ರೀಮತಿ ಚಂಪಾಭಾಯಿ ಫೀರಜಿ ಬೋಗ್ಲೆಯವರು ದಿನಾಂಕ 23-1-1994ರಂದು ನಿಧನರಾದುದನ್ನು ಈ ಸದನಕ್ಕೆ ವಿಷಾದದಿಂದ ತಿಳಿಸುತ್ತೇನೆ.

ಶ್ರೀಮತಿ ಚಂಪಾಭಾಯಿ ಫೀರಜಿ ಬೋಗ್ಲೆಯವರು ಬೆಳಗಾಂ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನವರಾಗಿದ್ದು, ಕಾಗವಾಡ ಮೀಸಲು ಕ್ಷೇತ್ರದಿಂದ ಎರಡನೆಯ, ಮೂರನೆಯ ಮತ್ತು ನಾಲ್ಕನೆಯ ವಿಧಾನಸಭೆಗೆ ಸತತವಾಗಿ ಆಯ್ಕೆಯಾಗಿದ್ದರು. ಹರಿಜನ ಕಾಲೋನಿಯಲ್ಲಿ ಪ್ರಾಥಮಿಕ ಶಾಲೆಗಳನ್ನು ಹಾಗೂ ವಿದ್ಯಾರ್ಥಿನಿಲಯಗಳನ್ನು ಸ್ಥಾಪಿಸಿ, ಹಿಂದುಳಿದ ಮತ್ತು ಹರಿಜನರ ಕಲ್ಯಾಣಕ್ಕಾಗಿ ಶ್ರಮಿಸಿರುವ. ಬೆಳಗಾಂ ಜಿಲ್ಲೆಯಲ್ಲಿ ಹಲವಾರು ಸಹಕಾರ ಸಂಘಗಳನ್ನು ಸ್ಥಾಪಿಸಿ, ಜನರ ಏಳಿಗೆಗಾಗಿ ಅಪಾರ ಸೇವೆ ಸಲ್ಲಿಸಿರುತ್ತಾರೆ.

ಶ್ರೀಮತಿಯವರ ಸ್ಮರಣಾರ್ಥವಾಗಿ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

ಸದನವು ದಿವಂಗತರ ಗೌರವಾರ್ಥವಾಗಿ ಒಂದು ನಿಮಿಷ ಮೌನವನ್ನಾಚರಿಸಿತು.

ಅಧ್ಯಕ್ಷರು : ಈ ಸಭೆ ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯವನ್ನು ಮೃತರ ಕುಟುಂಬ ವರ್ಗದವರಿಗೆ ಕಳುಹಿಸಿಕೊಡಲಾಗುವುದು.

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು.

ಸಕ್ಕರೆ ಹಾಗೂ ಸೀಮೆ ಎಣ್ಣೆಯ ವಿತರಣೆ

56 - ಶ್ರೀ ಡಿ.ಬಿ. ಚಂದ್ರೇಗೌಡ (ತೀರ್ಥಹಳ್ಳಿ) ; ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಾರ್ಡುದಾರರಿಗೆ, ಕಾರ್ಡೊಂದಕ್ಕೆ ಇದುವರೆಗೂ ವಿತರಿಸಲಾಗುತ್ತಿದ್ದ ಸಕ್ಕರೆ ಮತ್ತು ಸೀಮೆಎಣ್ಣೆ ಪ್ರಮಾಣವೆಷ್ಟು ಮತ್ತು ಬೆಲೆ ಎಷ್ಟು ?

ಆ) ಈಗ ಆ ಪ್ರಮಾಣವನ್ನು ಕಡಿಮೆ ಮಾಡಿಲಾಗಿದೆಯೇ

ಇ) ಹಾಗಿದ್ದಲ್ಲಿ ಕಡಿಮೆ ಮಾಡಲು ಕಾರಣಗಳೇನು;

ಈ) ಈಗ ಯಾವ ಬೆಲೆಯಲ್ಲಿ ಅವುಗಳನ್ನು ವಿತರಿಸಲಾಗುತ್ತಿದೆ;

ಶ್ರೀಮತಿ ಮನೋರಮ ಮಧ್ವರಾಜ್ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು)

ಅ) ಪ್ರಸ್ತುತ ಪ್ರತಿಯೊಂದು ಪಡಿತರ ಚೀಟಿಗೆ ತಿಂಗಳಿಗೆ ವಿತರಿಸುವ ಸಕ್ಕರೆ ಹಾಗೂ ಸೀಮೆಎಣ್ಣೆ ಪ್ರಮಾಣ ಕೆಳಕಂಡಂತೆ ಇರುತ್ತದೆ.